**Akashvani : Bangalore**
**Regional Bulletin In Kannada**
**20.12.2024 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**20.12.2024 / 18.40  hrs**

**<><*<><>*><>**

ಮುಖ್ಯಾಂಶಗಳು

**೧. ಸಕ್ಕರೆ ನಾಡಿನಲ್ಲಿ ನುಡಿ ಜಾತ್ರೆ ಸಂಭ್ರಮ; ಸಮ್ಮೇಳನಾಧ್ಯಕ್ಷ ಗೊ.ರು. ಚನ್ನಬಸಪ್ಪ ಅವರಿಂದ ೨೧ ಹಕ್ಕೊತ್ತಾಯ**

**೨. ಬೆಂಗಳೂರಿನಲ್ಲಿ ೨೦೨೫ರ ಆರಂಭದಲ್ಲಿ ಅಮೆರಿಕ ದೂತವಾಸ ಕಚೇರಿ ಸ್ಥಾಪನೆ**

**೩. ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ನಿಂದನೆ ಪ್ರಕರಣ; ಸಿ.ಟಿ.ರವಿ ಬಿಡುಗಡೆಗೆ ಹೈಕೋರ್ಟ್ ಆದೇಶ**

**೪. ಕ್ಷಯ ಮುಕ್ತ ಭಾರತ ಗುರಿ; ಚಿತ್ರದುರ್ಗದಲ್ಲಿ ಜಿಲ್ಲಾಡಳಿತದಿಂದ ಅಭಿಯಾನ**

**<><*<><>*><>**

ಸಕ್ಕರೆ ನಾಡು ಮಂಡ್ಯದಲ್ಲಿ ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಅದ್ದೂರಿಯಾಗಿ ಚಾಲನೆ ದೊರೆತಿದೆ. ರಾಜಮ್ಮಣ್ಣಿ- ನಾಲ್ವಡಿ ಕೃಷ್ಣರಾಜ ಒಡೆಯರ್ ಪ್ರಧಾನ ವೇದಿಕೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜ್ಯೋತಿ ಬೆಳಗಿಸುವುದರ ಮೂಲಕ ಸಮ್ಮೇಳನಕ್ಕೆ ಚಾಲನೆ ನೀಡಿದರು.  ಈ ಕುರಿತಂತೆ ಹೆಚ್ಚಿನ ಮಾಹಿತಿ ನೀಡಲಿದ್ದಾರೆ ನಮ್ಮ ಪ್ರತಿನಿಧಿ.  ಮೋಹನ್ ರಾಜ್  ಸಮ್ಮೇಳನ ಉದ್ಘಾಟಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಕಲೆ, ಸಾಹಿತ್ಯ, ನಾಡು, ನುಡಿ ಬೆಳವಣಿಗೆಗೆ ಇಂತಹ ಸಮ್ಮೇಳನಗಳು ಸಹಕಾರಿಯಾಗಿದ್ದು, ರಾಜ್ಯದಲ್ಲಿ ಕನ್ನಡ ಉಳಿವಿಗೆ ಸರ್ಕಾರ ಯಾವುದೇ ದಿಟ್ಟ ನಿರ್ಧಾರ ತೆಗೆದುಕೊಳ್ಳಲು ಬದ್ಧವಾಗಿದೆ ಎಂದು ತಿಳಿಸಿದರು.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

ಹತ್ತನೇ ತರಗತಿಯವರೆಗೆ ಕನ್ನಡ ಮಾಧ್ಯಮವೇ ಕಡ್ಡಾಯವಾಗುವುದು ಸೇರಿದಂತೆ ಒಟ್ಟು ೨೧ ವಿಷಯಗಳಿಗೆ ಸಮ್ಮೇಳನದ ಅಧ್ಯಕ್ಷರಾದ ಗೊ.ರು.ಚನ್ನಬಸಪ್ಪ ಹಕ್ಕೊತ್ತಾಯ ಮಂಡಿಸಿದ್ದಾರೆ. ಇಂಗ್ಲಿಷ್ ಮಾಧ್ಯಮದ ಶಾಲೆಗಳನ್ನು ಸರ್ಕಾರ ತೆರೆಯುವುದನ್ನಾಗಲಿ, ಖಾಸಗೀ ಶಾಲೆಗಳಿಗೆ ಅನುಮತಿ ನೀಡುವುದನ್ನಾಗಲಿ ಕೂಡಲೇ ನಿಲ್ಲಿಸಬೇಕು ಎಂದು ಕರೆ ನೀಡಿದ್ದಾರೆ.

**ಧ್ವನಿ: ಗೊ.ರು. ಚನ್ನಬಸಪ್ಪ**

ಸಮ್ಮೇಳನದಲ್ಲಿ ೪೫೦ಕ್ಕೂ ಹೆಚ್ಚು ಪುಸ್ತಕ ಮಳಿಗೆಗಳು ಹಾಗೂ ವಾಣಿಜ್ಯ ಮಳಿಗೆಗಳು ಗಮನ ಸೆಳೆದವು. ೫೦ ಸಾವಿರಕ್ಕೂ ಅಧಿಕ ಕನ್ನಡಾಭಿಮಾನಿಗಳು ಸಾಹಿತ್ಯ ಸಮ್ಮೇಳನಕ್ಕೆ ಸಾಕ್ಷಿಯಾದರು.

**<><*<><>*><>**

೨೦೨೫ ರ ಜನವರಿ ಎರಡನೇ ವಾರದಲ್ಲಿ ಬೆಂಗಳೂರಿನಲ್ಲಿ ಅಮೆರಿಕ ರಾಯಭಾರಿ ಕಚೇರಿ ಸ್ಥಾಪನೆಯಾಗಲಿದೆ. ಭಾರತದಲ್ಲಿನ ಅಮೆರಿಕ ರಾಯಭಾರಿ ಎರಿಕ್ ಗಾರ್ಸೆಟ್ಟಿ ಈ ವಿಷಯ ಪ್ರಕಟಿಸಿರುವ ಬಗ್ಗೆ ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ಮಾಹಿತಿ ನೀಡಿದ್ದಾರೆ. ಇದು  ಐತಿಹಾಸಿಕ ಮೈಲಿಗಲ್ಲು ಎಂದು ತೇಜಸ್ವಿ  ಸೂರ್ಯ ಅಭಿಪ್ರಾಯಪಟ್ಟಿದ್ದಾರೆ. ಈ ಕುರಿತಂತೆ ಸಾಮಾಜಿಕ ಜಾಲ ತಾಣದಲ್ಲಿ ಪ್ರತಿಕ್ರಿಯಿಸಿರುವ ತೇಜಸ್ವಿ ಸೂರ್ಯ , ಅಮೆರಿಕ ರಾಯಭಾರಿಗಳಾದ ಕೆನ್ನೆತ್

ಜಸ್ಟರ್ ಮತ್ತು ಎರಿಕ್ ಗಾರ್ಸೆಟ್ಟಿ ಹಾಗೂ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಧನ್ಯವಾದ  ತಿಳಿಸಿದ್ದಾರೆ. ೨೦೧೯ರಲ್ಲಿ ಬೆಂಗಳೂರಿನಲ್ಲಿ ರಾಯಭಾರ ಕಚೇರಿ ತೆರೆಯುವಂತೆ ವಿದೇಶಾಂಗ ಸಚಿವ ಡಾ ಎಸ್ ಜೈ ಶಂಕರ್ ಅವರನ್ನು ತೇಜಸ್ವಿ ಸೂರ್ಯ ಒತ್ತಾಯಿಸಿದ್ದರು. ಬೆಂಗಳೂರು ಭಾರತದ ಐಟಿ ಆದಾಯದ ಶೇಕಡ ೪೦ರಷ್ಟು ಕೊಡುಗೆ ನೀಡುತ್ತಿದ್ದು, ಅಮೆರಿಕಾ ವೀಸಾ-ಸಂಬಂಧಿತ ಸೇವೆಗಳಿಗಾಗಿ ಚೆನ್ನೈ ಅಥವಾ ಹೈದರಾಬಾದ್‌ಗೆ ತೆರಳಬೇಕಿತ್ತು.  ೨೦೨೩ ರಲ್ಲಿ ಪ್ರಧಾನ ಮಂತ್ರಿ ನರೇಂದ್ರ ಮೋದಿ, ಅಮೆರಿಕ ಭೇಟಿ ಸಂದರ್ಭದಲ್ಲಿ  ಬೆಂಗಳೂರಿನಲ್ಲಿ ದೂತಾವಾಸ ಕಚೇರಿ ತೆರೆಯುವ ಬಗ್ಗೆ ಘೋಷಿಸಲಾಗಿತ್ತು.

<><*<><>*><>

ಸಚಿವ ಲಕ್ಷ್ಮೀ ಹೆಬ್ಬಾಳ್ಕರ್‌ಗೆ ಆಕ್ಷೇಪಾರ್ಹ ಪದ ಬಳಸಿ ನಿಂದನೆ ಮಾಡಿರುವ ಆರೋಪ ಪ್ರಕರಣದಲ್ಲಿ ಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ತಕ್ಷಣವೇ ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶ ಹೊರಡಿಸಿದೆ. ಪ್ರಕರಣದ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಎಂ.ಜಿ.ಉಮಾ ನೇತೃತ್ವದ ಪೀಠವು ಸಿ.ಟಿ.ರವಿ ಈಗ ಎಲ್ಲಿದ್ದಾರೋ ಅಲ್ಲಿಯೇ ಬಿಡುಗಡೆ ಮಾಡಿ ಎಂದು ಮಧ್ಯಂತರ ಆದೇಶ ನೀಡಿದ್ದಾರೆ.  ತನಿಖೆಗೆ ಸಹಕರಿಸಬೇಕು ಎಂದು ಸಿ.ಟಿ.ರವಿಗೆ ಷರತ್ತನ್ನು ಕೋರ್ಟ್ ವಿಧಿಸಿದೆ. ಬೆಳಗಾವಿ ಕೋರ್ಟ್ ಆದೇಶದ ಮೇರೆಗೆ ಸಿಟಿ ರವಿಯವರನ್ನು ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಹಾಜರುಪಡಿಸಲು ಕರೆದುಕೊಂಡು ಬರುತ್ತಿದ್ದು. ತಕ್ಷಣವೇ ಬಿಡುಗಡೆ ಮಾಡುವಂತೆ ಹೈಕೋರ್ಟ್ ಆದೇಶ ಹೊರಡಿಸಿದೆ.

<><*<><>*><>

ಕ್ಷಯ ಮುಕ್ತ ಭಾರತ ಗುರಿ ತಲುಪಿಸುವ ಪ್ರಮುಖ ಹೆಜ್ಜೆಯಾಗಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮವನ್ನು ದೇಶಾದ್ಯಂತ ಹಮ್ಮಿಕೊಳ್ಳಲಾಗಿದೆ.   ಚಿತ್ರದುರ್ಗ ಜಿಲ್ಲೆಯಾದ್ಯಂತ ೨೦೨೫ರ ಮಾರ್ಚ್ ೧೭ ರವರೆಗೆ ಕಾರ್ಯಕ್ರಮ ನಡೆಯಲಿದೆ. ಕ್ಷಯ ರೋಗದ ಅಪಾಯ ಇರುವವರನ್ನು ಆರೈಕೆ ಮಾಡಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ತಿಳಿಸಿದ್ದಾರೆ. ೧೦೦ ದಿನಗಳ ಟಿಬಿ ಮುಕ್ತ ಭಾರತ ನಿರ್ಮಾಣ ಪ್ರಚಾರ ಆಂದೋಲನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ೨೦೨೫ರ ಹೊತ್ತಿಗೆ ವಾರ್ಷಿಕ ಹೊಸ ಕ್ಷಯರೋಗ ಪ್ರಮಾಣವನ್ನು  ೧ ಲಕ್ಷ ಜನಸಂಖ್ಯೆಗೆ ೪೭ ಪ್ರಕರಣಗಳಷ್ಟು ಕಡಿಮೆ ಮಾಡುವುದು. ಕ್ಷಯದಿಂದ ಮರಣ ಪ್ರಮಾಣವನ್ನ ಶೇಕಡ ೩.೭ ರಷ್ಟು ಕಡಿಮೆ ಮಾಡುವ ಗುರಿ ಹೊಂದಲಾಗಿದೆ. ಚಿತ್ರದುರ್ಗ ತಾಲೂಕಿನ ಒಟ್ಟು ೨೮೭ ಹಳ್ಳಿಗಳಲ್ಲಿ ದಿನಕ್ಕೆ ನಾಲ್ಕು ಹಳ್ಳಿಗಳಲ್ಲಿ ಜನರನ್ನು ಭೇಟಿ ಮಾಡಿ ಕ್ಷಯರೋಗದ ಬಗ್ಗೆ ಹೆಚ್ಚಿನ ಜಾಗೃತಿ ಮೂಡಿಸಲಾಗುತ್ತಿದೆ ಎಂದು ತಿಳಿಸಿದರು. ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣ ನಾಯ್ಕ್ ಮಾತನಾಡಿ, ಕಫ ಪರೀಕ್ಷೆ, ಎಕ್ಸ್ ರೇ ಪರೀಕ್ಷೆಯ ಸಿಬಿಎನ್‌ಎನ್‌ಎಟಿ (ಅಃಓಂಖ) ಪರೀಕ್ಷೆಗಳ ಮುಖಾಂತರ ರೋಗ ಪತ್ತೆ ಹಚ್ಚಲಾಗುತ್ತಿದೆ ಎಂದರು.

<><*<><>*><>

ಶಿಕಾರಿಪುರ ಸರ್ಕಾರಿ ಬಾಲಕಿಯರ ಪ್ರೌಢಶಾಲೆ ಹಾಗೂ ಸರ್ಕಾರಿ ಸಹ ಶಿಕ್ಷಣ ಪ್ರೌಢಶಾಲೆಗಳನ್ನು ಕೆಪಿಎಸ್ ಶಾಲೆಗಳನ್ನಾಗಿ ಉನ್ನತೀಕರಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಮಧು ಬಂಗಾರಪ್ಪ ತಿಳಿಸಿದ್ದಾರೆ. ಶಿಕಾರಿಪುರ ಸರ್ಕಾರಿ ಬಾಲಿಕಿಯರ ಪ್ರೌಢಶಾಲೆಗೆ ಭೇಟಿ ನೀಡಿ, ಪಾರಂಪರಿಕ ಕಟ್ಟಡ ವೀಕ್ಷಿಸಿ ಮಾತನಾಡಿದ ಅವರು, ಶಾಲೆಗಳನ್ನು ಉನ್ನತೀಕರಿಸುವ ಬಗ್ಗೆ ಡಿಡಿಪಿಐ, ಶಿಕ್ಷಣಾಧಿಕಾರಿಗಳು, ಮುಖ್ಯ ಶಿಕ್ಷಕರೊಂದಿಗೆ ಚರ್ಚಿಸಿ, ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದ್ದಾರೆ. ೧೮೭೮ರಲ್ಲಿ ಆರಂಭವಾಗಿರುವ ಈ ಶಾಲೆಯಲ್ಲಿ ಪ್ರಸ್ತುತ ೧ ಸಾವಿರದ ೩೦೦ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ.

<><*<><>*><>

ಬೆಂಗಳೂರಿನ ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಸ್ಥಳ ಗುರುತಿಸುವಂತೆ ಮುಖ್ಯ ಆಯುಕ್ತ ತುಷಾರ್ ಗಿರಿ ನಾಥ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. “ಮುಖ್ಯ ಆಯುಕ್ತರ ನಡೆ ವಲಯದ ಕಡೆ”ಯಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದ ವೇಳೆ ಸಾರ್ವಜನಿಕರೊಬ್ಬರು, ಮಹದೇವಪುರ ವಲಯ ವ್ಯಾಪ್ತಿಯಲ್ಲಿ ಕೆಲವೆಡೆ ಸಾರ್ವಜನಿಕ ಶೌಚಾಲಯವನ್ನು ನಿರ್ಮಾಣ ಮಾಡಿಕೊಡಲು ಮನವಿ ಮಾಡಿದರು. . ಪಾಲಿಕೆ ವ್ಯಾಪ್ತಿಯಲ್ಲಿ ಹೊಸದಾಗಿ ೨೦೦ ಹೈಟೆಕ್ ಸಾರ್ವಜನಿಕ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕ್ರಮವಹಿಸಲಾಗುತ್ತಿದೆ ಎಂದು ತಿಳಿಸಿದರು. ಇದೇ ವೇಳೆ ಸೊಳ್ಳೆ ನಿಯಂತ್ರಣಕ್ಕೆ ಸೂಕ್ತ ಕ್ರಮ ಕೈಗೊಳ್ಳುವಂತೆ ಆರೋಗ್ಯ ವೈದ್ಯಾಧಿಕಾರಿಗೆ ಸೂಚನೆ ನೀಡಿದ್ದಾರೆ.

**<><*<><>*><>**

ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಮಾಡಲಗೇರಿ ಗ್ರಾಮದಲ್ಲಿ ಬ್ಯಾಡಗಿ ಮೆಣಸಿನಕಾಯಿ ಬೆಳೆಯ ಕ್ಷೇತ್ರೋತ್ಸವ ಭರಮಗೌಡ ರಾಯನಗೌಡರ ಹೊಲದಲ್ಲಿ ಜರುಗಿತು. ಕೃಷಿ ವಿಜ್ಞಾನಿ ಡಾ.ವಿನಾಯಕ ನಿರಂಜನ್ ಮಾತನಾಡಿ, ಮುಂಡರಗಿ ತಾಲೂಕಿನ ಹಳ್ಳಿಗುಡಿ, ರೋಣ ತಾಲೂಕಿನ ಮಾಡಲಗೇರಿ ಹಾಗೂ ಗದಗ ತಾಲೂಕಿನ ಅಸುಂಡಿಯಲ್ಲಿ ಗ್ರಾಮಗಳಲ್ಲಿ ರುದ್ರಾ ಮೆಣಸಿನಕಾಯಿ ತಳಿಯನ್ನು ಸಮಗ್ರ ಬೆಳೆ ನಿರ್ವಹಣೆಯೊಂದಿಗೆ ಅಳವಡಿಸಲಾಗಿದೆ ಎಂದು ತಿಳಿಸಿದರು. ತೋಟಗಾರಿಕೆ ತಜ್ಞರಾದ ಹೇಮಾವತಿ ಹಿರೇಗೌಡರ ಮಾತನಾಡಿ, ರುದ್ರಾ ಮೆಣಸಿನಕಾಯಿ ತಳಿಯು ಕಾಯಿಗಳು ಒಣಗಿದಾಗ ಕಡು ಕೆಂಪು ಬಣ್ಣಕ್ಕೆ ತಿರುಗುತ್ತದೆ. ಎಕರೆಗೆ ೮ ರಿಂದ ೧೦ ಕ್ವಿಂಟಲ್ ಒಣ ಮೆಣಸಿನಕಾಯಿ ಕೊಡುವ ಸಾಮರ್ಥ್ಯ ಹೊಂದಿದೆ ಎಂದರು.

**<><*<><>*><>**

ರೇಷ್ಮೆ ಕೃಷಿ ಉತ್ಪಾದನೆಯಲ್ಲಿ ದೇಶದಲ್ಲಿಯೇ ಕರ್ನಾಟಕ ರಾಜ್ಯ ಮೊದಲಿನಿಂದಲೂ ಪ್ರಥಮ ಸ್ಥಾನದಲ್ಲಿದೆ ಎಂದು ಕೇಂದ್ರ ರೇಷ್ಮೆ ಮಂಡಳಿ ಸದಸ್ಯ ಕಾರ್ಯದರ್ಶಿ ಪಿ.ಶಿವಕುಮಾರ್ ತಿಳಿಸಿದ್ದಾರೆ. ಚಿತ್ರದುರ್ಗ ದಲ್ಲಿ ಮಾತನಾಡಿದ ಅವರು ಮಂಡಳಿ ಪ್ರಾರಂಭವಾದಾಗ ಜಾಗತೀಕವಾಗಿ ನಮ್ಮ ಉತ್ಪಾದನೆ ಶೇ.೬ರಷ್ಟು ಇತ್ತು. ಇಂದು ಶೇಕಡ ೪೨ರಷ್ಟು ಆಗಿದ್ದು, ಇದಕ್ಕೆ ರೈತರು ಹಾಗೂ ಕಾರ್ಮಿಕರ ಪರಿಶ್ರಮವೇ ಕಾರಣ ಎಂದು ತಿಳಿಸಿದರು. ದೇಶದ ೨೫ಕ್ಕೂ ಹೆಚ್ಚು ರಾಜ್ಯಗಳಲ್ಲಿ ರೇಷ್ಮೆ ಕೆಲಸಗಳು ನಡೆಯುತ್ತಿದ್ದು. ಇದರಲ್ಲಿ ಕರ್ನಾಟಕ ರಾಜ್ಯ ನಂಬರ್ ವನ್ ಸ್ಥಾನದಲ್ಲಿ ಮುಂದುವರೆದಿದೆ ಎಂದು ಹೇಳಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೮.೩೫ ಕ್ಕೆ**